**Akashvani : Bangalore**
**National Bulletin In Kannada**
**10.11.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**10.11.2024 / 7.35 am**

<><*<><>*><>

**ಮುಖ್ಯಾಂಶಗಳು**

೧. ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭಾ ಚುನಾವಣೆ; ವಿವಿಧ ರಾಜಕೀಯ ನಾಯಕರಿಂದ ಪ್ರಣಾಳಿಕೆ ಬಿಡುಗಡೆ

೨. ಇಂದು ಜಗತ್ತಿನಾದ್ಯಂತ ರೋಗ ನಿರೋಧಕ ದಿನಾಚರಣೆ; ಜನ ಜಾಗೃತಿ ಅಭಿಯಾನ

೩. ಪಂಜಾಬ್ ಮಾರುಕಟ್ಟೆಗಳಿಗೆ ೧೨೬ ಲಕ್ಷಕ್ಕೂ ಅಧಿಕ ಮೆಟ್ರಿಕ್ ಟನ್ ಭತ್ತ ಪೂರೈಕೆ - ಕೇಂದ್ರ ಸರ್ಕಾರ

೪. ಟಿ- ೨೦ ಕ್ರಿಕೆಟ್; ಇಂದು ಭಾರತ - ದಕ್ಷಿಣ ಆಫ್ರಿಕಾ ಮುಖಾಮುಖಿ

<><*<><>*><>

ಜಾರ್ಖಂಡ್‌ನಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಯ ಪ್ರಚಾರವು ಬಿರುಸುಗೊಂಡಿದೆ. ಎನ್‌ಡಿಎ ಮತ್ತು ಐಎನ್‌ಡಿಐ ಮೈತ್ರಿಕೂಟದ ನಾಯಕರು ಮತದಾರರನ್ನು ಓಲೈಸುವ ಪ್ರಕ್ರಿಯೆಯಲ್ಲಿ ತೊಡಗಿದ್ದಾರೆ. ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಜಾರ್ಖಂಡ್‌ನಲ್ಲಿ ಎರಡು ರ‍್ಯಾಲಿಗಳಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿಯವರ ಮೊದಲ ಚುನಾವಣಾ ಸಭೆಯು ಬೊಕಾರೊದ ಚಂದಂಕಿಯಾರಿ ವಿಧಾನಸಭಾ ಕ್ಷೇತ್ರದ ಚಂಡಿಪುರದಲ್ಲಿ ಮಧ್ಯಾಹ್ನ ನಡೆಯಲಿದ್ದು, ಎರಡನೇ ಚುನಾವಣಾ ರ‍್ಯಾಲಿ ಗಹ್ವಾರ್‌ದಲ್ಲಿ ನಡೆಯಲಿದೆ. ಸಂಜೆ ೫.೧೫ಕ್ಕೆ ರಾಂಚಿಯಲ್ಲಿ ರೋಡ್ ಶೋ ನಡೆಸಲಿದ್ದಾರೆ. ಈ ನಡುವೆ ಎಜೆಎಸ್‌ಯು ಮತ್ತು ಎಡ ಪಕ್ಷಗಳ ನಾಯಕರು ಜಾರ್ಖಂಡ್‌ನ ವಿವಿಧ ಭಾಗಗಳಲ್ಲಿ ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ೮೧ ಸದಸ್ಯ ಬಲದ ವಿಧಾನಸಭೆಗೆ ಈ ತಿಂಗಳ ೧೩ ಮತ್ತು ೨೦ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ಇದೇ ೨೩ ರಂದು ಮತ ಎಣಿಕೆ ನಡೆಯಲಿದೆ.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಮುಂಬೈನಲ್ಲಿ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಭಾರತೀಯ ಜನತಾ ಪಕ್ಷದ ಪ್ರಣಾಳಿಕೆ - ಸಂಕಲ್ಪ ಪತ್ರವನ್ನು ಬಿಡುಗಡೆ ಮಾಡಲಿದ್ದಾರೆ. ಅವರು, ಉತ್ತರ ಮಹಾರಾಷ್ಟ್ರ ಮತ್ತು ವಿದರ್ಭಾ ಪ್ರದೇಶದ ಜಲಗಾಂವ್, ಬುಲ್ಡಾನಾ ಮತ್ತು ಅಮರಾವತಿಯಲ್ಲಿ ಮೂರು ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><*<><>*><>

ಕಾಂಗ್ರೆಸ್ ಅಧ್ಯಕ್ಷ ಮಲಿಕಾರ್ಜುನ್ ಖರ್ಗೆ ಅವರು ಇಂದು ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಯ ಮಹಾ ವಿಕಾಸ್ ಅಘಾಡಿಯ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಿದ್ದಾರೆ. ಎಐಸಿಸಿ ಪ್ರಧಾನ

ಕಾರ್ಯದರ್ಶಿ ಕೆಸಿ ವೇಣುಗೋಪಾಲ್, ಎಐಸಿಸಿ ಮಹಾರಾಷ್ಟ್ರ ಉಸ್ತುವಾರಿ ರಮೇಶ್ ಚೆನ್ನಿತ್ತಲ, ಎಂಪಿಸಿಸಿ ಅಧ್ಯಕ್ಷ ನಾನಾ ಪಟೋಲೆ, ಸೇರಿದಂತೆ ಹಿರಿಯ ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

'ವಿಶ್ವ ರೋಗನಿರೋಧಕ ದಿನ'ವನ್ನಾಗಿ ಇಂದು ಜಗತ್ತಿನಾದ್ಯಂತ ಆಚರಣೆ ಮಾಡಲಾಗುತ್ತಿದೆ. ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವುದು ಮತ್ತು ಸಾರ್ವಜನಿಕ ಆರೋಗ್ಯವನ್ನು ಕಾಪಾಡಿಕೊಂಡು ಬರುವಲ್ಲಿ ಲಸಿಕೆಗಳ ಪಾತ್ರ ಕುರಿತು ಜಾಗೃತಿ ಮೂಡಿಸುವುದು ಈ ದಿನದ ಪ್ರಮುಖ ಉದ್ದೇಶವಾಗಿದೆ. ಜೀವರಕ್ಷಕ ಲಸಿಕೆಗಳನ್ನು ಪ್ರತಿಯೊಬ್ಬ ವ್ಯಕ್ತಿ ಪಡೆದುಕೊಳ್ಳಬೇಕು ಎಂಬುದರ ಮಹತ್ವವನ್ನು ತಿಳಿಸುವುದು ಈ ದಿನದ ಗುರಿಯಾಗಿದೆ. ರೋಗ ನಿರೋಧಕ ಲಸಿಕೆಗಳನ್ನು ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಭಾರತದಲ್ಲಿ ಪೋಲಿಯೊ, ತಾಯಿ ಮತ್ತು ನವಜಾತ ಶಿಶುವಿಗೆ ಬಾಧಿಸುವ ಧನುರ್ವಾಯು ಸೇರಿದಂತೆ ಮಾರಾಣಾಂತಿಕ ಕಾಯಿಲೆಗಳನ್ನು ನಿರ್ಮೂಲನೆ ಮಾಡುವಲ್ಲಿ ಮಹತ್ವದ ಸಾಧನೆ ಮಾಡಲಾಗಿದೆ. ೨೦೨೩-೨೪ನೇ ಹಣಕಾಸು ವರ್ಷದಲ್ಲಿ ದೇಶದಲ್ಲಿ ಸಂಪೂರ್ಣ ರೋಗ ನಿರೋಧಕ ವ್ಯಾಪ್ತಿ ಪ್ರಮಾಣ ಶೇಕಡ ೯೨.೨೩ ಕ್ಕೆ ತಲುಪಿದೆ.

<><*<><>*><>

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ- ಎಂ.ಎಸ್.ಎಂ.ಇ ಗಳಿಗೆ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ೫ ಲಕ್ಷ ೭೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಸಾಲ ಸೌಲಭ್ಯ ನೀಡಬೇಕೆಂಬ ಗುರಿ ನಿಗದಿಪಡಿಸಲಾಗಿದೆ ಎಂದು  ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಎಂ.ಎಸ್.ಎಂ.ಇ ಗಳಿಗೆ ಈ ಪ್ರಮಾಣದಲ್ಲಿ ಸಾಲ ಸೌಲಭ್ಯ ಕಲ್ಪಿಸಬೇಕೆಂದು ಸೂಚಿಸಿಲಾಗಿದೆ ಎಂದು ತಿಳಿಸಿದರು. ಬೆಂಗಳೂರಿನಲ್ಲಿ ನಿನ್ನೆ ಎಸ್‌ಐಡಿಬಿಐ- ಸಿಡ್ಬಿ ಏರ್ಪಡಿಸಿದ್ದ ರಾಷ್ಟ್ರೀಯ ಎಂ.ಎಸ್.ಎಂ.ಇ ಕ್ಲಸ್ಟರ್ ಔಟ್‌ರೀಚ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಎಂ.ಎಸ್.ಎಂ.ಇ ಗಳ ಬೆಳವಣಿಗೆಗೆ ಕೇವಲ ಶೇಕಡ ೯.೨ ರಷ್ಟು ಸಾಲಸೌಲಭ್ಯ ಕಲ್ಪಿಸುತ್ತಿವೆ. ಆದರೆ, ಖಾಸಗಿ ಬ್ಯಾಂಕ್‌ಗಳು ಶೇಕಡ ೨೫ ರಷ್ಟು ಹಾಗೂ ಎನ್‌ಬಿಎಫ್‌ಸಿ ಗಳು ಶೇಕಡ ೩೯ ರಷ್ಟು ಸಾಲ ಸೌಲಭ್ಯ ನೀಡುತ್ತಿವೆ ಎಂದು ವಿವರಿಸಿದರು. ಮುದ್ರಾ ಯೋಜನೆಯಡಿ ಈ ಹಿಂದೆ ನೀಡಲಾಗುತ್ತಿದ್ದ ಸಾಲದ ಮೊತ್ತ ೧೦ ಲಕ್ಷ ರೂಪಾಯಿಗಳಿಂದ ೨೦ ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.  ಹೊಸ ವಿಭಾಗ 'ತರುಣ್ ಪ್ಲಸ್' ಅಡಿಯಲ್ಲಿ ಸಾಲ ಪಡೆದ ಉದ್ಯಮದಾರರು ಸಾಲ ಮರುಪಾವತಿ ಮಾಡಿದಲ್ಲಿ ಅವರಿಗೆ ೨೦ ಲಕ್ಷ ರೂಪಾಯಿವರೆಗೂ ಸಾಲ ಸೌಲಭ್ಯ ಕಲ್ಪಿಸಲಾಗುವುದು ಎಂದು ಹೇಳಿದರು.

<><*<><>*><>

ಪಂಜಾಬ್ ಮಾರುಕಟ್ಟೆಗಳಿಗೆ ೧೨೬ ಲಕ್ಷಕ್ಕೂ ಅಧಿಕ ಮೆಟ್ರಿಕ್ ಟನ್ ಭತ್ತ ಪೂರೈಕೆಯಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಪೈಕಿ ೧೨೦ ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ರಾಜ್ಯ ಸರ್ಕಾರಗಳ ಸಂಸ್ಥೆಗಳು ಹಾಗೂ ಭಾರತೀಯ ಆಹಾರ ನಿಗಮ- ಎಫ್‌ಸಿಐ ಸಂಗ್ರಹಿಸಿವೆ. 'ಎ' ಶ್ರೇಣಿ ಗುಣಮಟ್ಟದ ಭತ್ತಕ್ಕೆ ಕ್ವಿಂಟಲ್‌ಗೆ ೨ ಸಾವಿರದ ೩೨೦ ರೂಪಾಯಿ ಕನಿಷ್ಠ ಬೆಂಬಲ ಬೆಲೆ ನೀಡಿ ಖರೀದಿಸಲಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವಾಲಯ ತಿಳಿಸಿದೆ. ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ ಸರ್ಕಾರ, ಇದುವರೆಗೆ ಒಟ್ಟು ೨೭ ಸಾವಿರದ ೯೫ ಕೋಟಿ

ರೂಪಾಯಿ ಮೌಲ್ಯದ ಭತ್ತವನ್ನು ಖರೀದಿಸಿದೆ. ಇದರಿಂದ ಸುಮಾರು ೬ ಲಕ್ಷ ೫೮ ಸಾವಿರ ರೈತರಿಗೆ ಲಾಭವಾಗಿದೆ. ೨೦೨೪-೨೫ ನೇ ಸಾಲಿನಲ್ಲಿ ಅಕ್ಟೋಬರ್ ೧ ರಿಂದ ಪಂಜಾಬ್‌ನಲ್ಲಿ ಭತ್ತ ಸಂಗ್ರಹ ಪ್ರಕ್ರಿಯೆ ಆರಂಭವಾಗಿದೆ. ರಾಜ್ಯದೆಲ್ಲೆಡೆ ೨ ಸಾವಿರದ ೯೨೬ ನಿಯೋಜಿತ ಮಂಡಿಗಳು ಮತ್ತು ತಾತ್ಕಾಲಿಕ ಮಾರುಕಟ್ಟೆಗಳಲ್ಲಿ ಭತ್ತವನ್ನು ಸಂಗ್ರಹಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಸಕ್ತ ಹಂಗಾಮಿನಲ್ಲಿ, ಈ ತಿಂಗಳ ಅಂತ್ಯದವರೆಗೆ ೧೮೫ ಲಕ್ಷ ಮೆಟ್ರಿಕ್ ಟನ್ ಭತ್ತ ಖರೀದಿಸುವ ಗುರಿಯನ್ನು ಕೇಂದ್ರ ಸರ್ಕಾರ ನಿಗದಿ ಮಾಡಿದೆ.

<><*<><>*><>

ಇಂಟರ್ನ್ಯಾಷನಲ್ ಫಿಲ್ಮ್ ಫೆಸ್ಟಿವಲ್ ಆಫ್ ಇಂಡಿಯಾ ಐಎಫ್‌ಐ-೨೦೨೪, ಚಲನಚಿತ್ರಗಳು, ಆಹಾರ, ಕಲೆ ಮತ್ತು ಸಂವಾದಾತ್ಮಕ ಅನುಭವಗಳ ಮೂಲಕ ಸಮುದಾಯಗಳನ್ನು ಒಟ್ಟುಗೂಡಿಸಲು ವಿನ್ಯಾಸಗೊಳಿಸಲಾದ ಮನರಂಜನಾ ಮಹೋತ್ಸವವಾದ ಐಎಫ್‌ಐ, ಇಎಸಿಟಿಎ ಅನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ನವೆಂಬರ್ ೨೦ ರಿಂದ ೨೮ ರವರೆಗೆ ಗೋವಾದ ಪಂಜಿಮ್‌ನ ಜಲಾಭಿಮುಖದಲ್ಲಿರುವ ಕಲಾ ಅಕಾಡೆಮಿಯಲ್ಲಿ ಐಎಫ್‌ಐ, ಇಎಸಿಟಿಎ ಆಯೋಜಿಸಲಾಗಿದೆ. ಈ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾರತೀಯ ಸಂಸ್ಕೃತಿ, ಆಹಾರ, ಸಂಗೀತ ಮತ್ತು ಸಿನಿಮಾದ ರೋಮಾಂಚಕ ವೈವಿಧ್ಯತೆಯನ್ನು ಅನ್ವೇಷಿಸಲು ಪ್ರವಾಸಿಗರಿಗೆ ಅವಕಾಶವನ್ನು ನೀಡುತ್ತದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ., ಆರಂಭಿಕ- ನೋಂದಣಿಯು ಇಂದಿನವರೆಗೆ ಒಂದು ಸಾವಿರ ರೂಪಾಯಿಗಳ ವಿಶೇಷ ದರದಲ್ಲಿ ತೆರೆದಿರುತ್ತದೆ. ಕೊನೆಯ ದಿನಾಂಕದ ನಂತರ, ನೋಂದಣಿ ಶುಲ್ಕ ಎರಡು ಸಾವಿರ ರೂಪಾಯಿ ಆಗಿದರಲಿದೆ . ಈ ನೋಂದಣಿಯು ಐಎಫ್‌ಐಇಎಸಿಟಿಎ ನ ವಾರದ ಅವಧಿಯ ಹಬ್ಬಗಳನ್ನು ಒಳಗೊಂಡಂತೆ ಎಲ್ಲಾ ಕಾರ್ಯಕ್ರಮಗಳಿಗೆ ಪ್ರವೇಶವನ್ನು ನೀಡಲಿದೆ.

<><*<><>*><>

ಕೇಂದ್ರ ಮಾಹಿತಿ ಮತ್ತು ಪ್ರಸಾರ, ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರು ವಿಶೇಷವಾಗಿ ಚಲನಚಿತ್ರಗಳ ನಿರ್ಮಾಣ, ಡಿಜಿಟಲ್ ವಿಷಯ ರಚನೆ ಮತ್ತು ಮಾಧ್ಯಮ ತಂತ್ರಜ್ಞಾನದಲ್ಲಿ ಹೂಡಿಕೆಯನ್ನು ಬೆಂಬಲಿಸುವ ಉಪಕ್ರಮಗಳ ಮೂಲಕ ಉದ್ಯಮವನ್ನು ಉತ್ತೇಜಿಸುವ ಸರ್ಕಾರದ ಪ್ರಯತ್ನಗಳ ಬಗ್ಗೆ ಒತ್ತಿ ಹೇಳಿದ್ದಾರೆ. ಭಾರತದ ೫೫ ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವ, ಫಿಲ್ಮ್ ಬಜಾರ್ ೨೦೨೪ ಮತ್ತು ವಿಶ್ವ ಆಡಿಯೋ ವಿಷುಯಲ್ ಮತ್ತು ಎಂಟರ್‌ಟೈನ್‌ಮೆಂಟ್ ಶೃಂಗಸಭೆಯು ಮುಂದಿನ ವರ್ಷ ಫೆಬ್ರವರಿ ೦೫-೦೯ ರ ನಡುವೆ ನವದೆಹಲಿಯಲ್ಲಿ ಭಾರತ್ ಮಂಟಪದಲ್ಲಿ ನಡೆಯಲಿದೆ ಎಂದು ಸಚಿವರು ಹೇಳಿದ್ದಾರೆ. ಜಾಗತಿಕ ವಿಷಯ ಪರಿಸರ ವ್ಯವಸ್ಥೆಯಲ್ಲಿ ಭಾರತದ ಸ್ಥಾನವನ್ನು ವರ್ಧಿಸಲು ಮತ್ತು ಮಾಧ್ಯಮ ಹಾಗೂ ಮನರಂಜನಾ ವಲಯಕ್ಕೆ ಅಂತರರಾಷ್ಟ್ರೀಯ ಹೂಡಿಕೆಯನ್ನು ಆಕರ್ಷಿಸಲು ವೇವ್ಸ್ ಅನ್ನು ಕಾರ್ಯಕ್ರಮವನ್ನಾಗಿ ವಿನ್ಯಾಸಗೊಳಿಸಲಾಗಿದೆ ಎಂದು ಅವರು ಹೇಳಿದರು. ಮಾಧ್ಯಮ, ಫಿಮ್ಸ್ ಮತ್ತು ಮನರಂಜನಾ ಉದ್ಯಮಗಳ ವೃತ್ತಿಪರರೊಂದಿಗೆ ಅವರ ಸಂವಾದದಲ್ಲಿ ಸಚಿವರೊಂದಿಗೆ ನೇರವಾಗಿ ತೊಡಗಿಸಿಕೊಳ್ಳಲು ಮತ್ತು ಆ ಕ್ಷೇತ್ರದಲ್ಲಿ ನಡೆಯುತ್ತಿರುವ ಸವಾಲುಗಳು ಮತ್ತು ಅವಕಾಶಗಳನ್ನು ಚರ್ಚಿಸಲು ಅವಕಾಶವಿದೆ ಎಂದು ಅವರು ಹೇಳಿದರು.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ, ನಿನ್ನೆ ಬಾರಾಮುಲ್ಲಾ ಜಿಲ್ಲೆಯ ಸೋಪೋರ್ ಪಟ್ಟಣದಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಒಬ್ಬ ಭಯೋತ್ಪಾದಕ ಹತನಾಗಿದ್ದು, ಮೂರು ಭಯೋತ್ಪಾದಕರನ್ನು ಸೆರೆಹಿಡಿಯಲಾಗಿದೆ.

<><*<><>*><>

ದಕ್ಷಿಣ ಆಫ್ರಿಕಾದ ಗೆಬರ್ಹದಲ್ಲಿ ಇಂದು ಭಾರತ ಮತ್ತು ದಕ್ಷಿಣಾ ಆಫ್ರಿಕಾ ತಂಡಗಳ ನಡುವಿನ ೪ ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯ ಸೆಂಟ್ ಜಾರ್ಜ್‌ಪಾರ್ಕ್ ಕ್ರೀಡಾಂಗಣದಲ್ಲಿಂದು ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಡರ್ಬಾನ್‌ನಲ್ಲಿ ನಡೆದ ಮೊದಲ ಪಂದ್ಯದಲ್ಲಿ ೬೧ ರನ್‌ಗಳಿಂದ ಗೆಲುವು ಸಾಧಿಸಿದ ಸೂರ್ಯಕುಮಾರ್ ನೇತೃತ್ವದ ಭಾರತ ತಂಡ ಸರಣಿಯಲ್ಲಿ ೧-೦ ಅಂತರದಲ್ಲಿ ಮುನ್ನಡೆ ಸಾಧಿಸಿದೆ.

<><*<><>*><>

ನವದೆಹಲಿಯ ಡಾ.ಕರ್ಣಿ ಸಿಂಗ್ ರೇಂಜ್‌ನಲ್ಲಿ ನಡೆಯುತ್ತಿರುವ ವಿಶ್ವ ವಿಶ್ವವಿದ್ಯಾಲಯ ಶೂಟಿಂಗ್ ಚಾಂಪಿಯನ್‌ಶಿಪ್‌ನ ಮೊದಲ ದಿನವಾದ ನಿನ್ನೆ ಭಾರತ ಎರಡು ಬೆಳ್ಳಿ ಮತ್ತು ಒಂದು ಕಂಚಿನ ಪದಕಗಳನ್ನು ಗೆದ್ದಿದೆ. ಪುರುಷರ ೧೦ ಮೀಟರ್ ಏರ್ ಪಿಸ್ತೂಲ್‌ನಲ್ಲಿ ಆಕಾಶ್ ಭಾರದ್ವಾಜ್ ೨೩೮.೮ ಅಂಕಗಳೊಂದಿಗೆ ಬೆಳ್ಳಿ ಪದಕ ಜಯಿಸಿದ್ದಾರೆ. ಜೆಕ್ ಗಣರಾಜ್ಯದ ಪಾವೆಲ್, ಚಿನ್ನದ ಪದಕ ಮತ್ತು ಪೋಲೆಂಡ್‌ನ ಫಿಲಿಪ್ ವ್ಯಾಗ್ನರ್ ಕಂಚಿನ ಪದಕ ಪಡೆದರು.  ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ನಲ್ಲಿ ಭಾರತದ ಪಾಲಕ್, ೨೩೯.೧ ಅಂಕಗಳೊಂದಿಗೆ ಬೆಳ್ಳಿ ಪದಕ ಗೆದ್ದರು. ಅರ್ಷದೀಪ್ ಕೌರ್ ಕಂಚಿನ ಪದಕ ಪಡೆದರು. ತೈಪೆಯ ಹೆಂಗ್ ಯು ಲುಯೆ ಚಿನ್ನದ ಪದಕ ಗೆದ್ದರು.  ಪಿಸ್ತೂಲ್, ರೈಫಲ್ ಮತ್ತು ಶಾಟ್‌ಗನ್ ಸೇರಿದಂತೆ ಎಲ್ಲಾ ೧೫ ಒಲಿಂಪಿಕ್ ಸ್ಪರ್ಧೆಗಳಲ್ಲಿ ಭಾರತ ಮೂರು ಸದಸ್ಯರ ತಂಡಗಳನ್ನು ಕಣಕ್ಕಿಳಿಸುತ್ತಿದೆ. ಚಾಂಪಿಯನ್‌ಶಿಪ್‌ನಲ್ಲಿ ಒಟ್ಟು ೨೨ ದೇಶಗಳು ಭಾಗವಹಿಸಿವೆ. ಕಳೆದ ಆವೃತ್ತಿಯಲ್ಲಿ ಭಾರತ ತಂಡ ಎಂಟು ಚಿನ್ನ, ನಾಲ್ಕು ಬೆಳ್ಳಿ ಹಾಗೂ ಎರಡು ಕಂಚಿನ ಪದಕ ಗೆದ್ದಿತ್ತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧೨ ಕ್ಕೆ <>*><>